ಕನ್ನಡಪ್ರಭ

**Monday 31st July 2017**

# Inaugral Function forFirst Semester BE Students 2017-18 Batch held at RVCE Campus

ಕನ್ನಡಪ್ರಭ

### ಎಂಜಿನಿಯರಿಂಗ್ ವಿದ್ಯಾರ್ಥಿಗಳು ಹೊಸ ಸಂಶೋಧನೆ, ಆವಿಷ್ಕಾರಗಳಿಗೆ ಒತ್ತು ಕೊಡಿ | ಸಂಸದ ರಾಜೀವ್ ಚಂದ್ರಶೇಖರ್ ಸಲಹೆ

## ತಂತ್ರಜ್ಞಾನ ಕ್ಷೇತ್ರದಲ್ಲಿ ಸಾಕಷ್ಟು ಸುಧಾರಣೆ ಆಗಬೇಕು

• **ಕನ್ನಡಪ್ರಭವಾರ್ತೆ** ಬೆಂಗಳೂರು

ತಂತ್ರಜ್ಞಾನ ಕ್ಷೇತ್ರದಲ್ಲಿ ಸಾಕಷ್ಟು ಸುಧಾರಣೆಗಳಾಗಬೇಕಿದೆ. ಎಂಜಿನಿಯರಿಂಗ್ ವಿದ್ಯಾರ್ಥಿಗಳು ಈ ನಿಟ್ಟಿನಲ್ಲಿ ಹೊಸ ಸಂಶೋಧನೆ, ಆವಿಷ್ಕಾರಗಳಿಗೆ ಒತ್ತು ನೀಡಬೇಕು ಎಂದು ರಾಜ್ಯಸಭಾ ಸದಸ್ಯ ರಾಜೀವ್ ಚಂದ್ರಶೇಖರ್ ಸಲಹೆ ನೀಡಿದ್ದಾರೆ.

ಕೆಂಗೇರಿ ಬಳಿಯ ಆರ್.ವಿ. ಎಂಜಿನಿಯರಿಂಗ್ ಕಾಲೇಜಿನಲ್ಲಿ ಭಾನುವಾರ '2017-18ನೇ ಬ್ಯಾಚ್‌ನ ಪ್ರಥಮ ಸೆಮಿಸ್ಟರ್ ಬಿ.ಇ. ತರಗತಿ ಕಾರ್ಯಕ್ರಮ'ಗಳನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಇಂದಿನ ಸ್ಪರ್ಧಾತ್ಮಕ ಜಗತ್ತಿನಲ್ಲಿ ತಾಂತ್ರಿಕ ಕ್ಷೇತ್ರದ ಬದಲಾವಣೆ ಅತಿ ವೇಗವಾಗಿ ಸಾಗುತ್ತಿದೆ. ಅಂತರ್ಜಾಲ ಮತ್ತು ತಂತ್ರಜ್ಞಾನ ಮನುಷ್ಯನ ಶೈಕ್ಷಣಿಕ, ಸಂವಹನ, ವ್ಯವಹಾರಿಕ ಜೀವನವನ್ನೇ ಬದಲಿಸುತ್ತಾ ಸಾಗಿದೆ. ಕ್ಷೇತ್ರದಲ್ಲಿ ಇನ್ನೂ ಬಹಳಷ್ಟು ಸುಧಾರಣೆಗಳಾಗಬೇಕಿದೆ. ಈ ದೃಷ್ಟಿಕೋನದಲ್ಲಿ ವಿದ್ಯಾರ್ಥಿಗಳು ಪ್ರಕೃತಿಯಲ್ಲಿ ಅಡಗಿರುವ ಹೊಸ ಸಂಶೋಧನೆ, ಸಂಗತಿಗಳ ಆವಿಷ್ಕಾರಗಳನ್ನು ಹೊರ ತರಲು ನಿರಂತರ ಪ್ರಯತ್ನಗಳನ್ನು ನಡೆಸುತ್ತಿರಬೇಕು. ಇದಕ್ಕೆ ಸಾಕಷ್ಟು ಅವಕಾಶಗಳೂ ಲಭ್ಯವಿದೆ ಎಂದು ತಿಳಿಸಿದರು.

ವಿದ್ಯಾರ್ಥಿ ಜೀವನದ 2ನೇ ಹಂತವಾದ ವಿಶ್ವವಿದ್ಯಾಲಯ ಅಥವಾ ಕಾಲೇಜು ಶಿಕ್ಷಣ ಬಹುಮುಖ್ಯ ಘಟ್ಟ. ಪ್ರತಿಯೊಬ್ಬ ವಿದ್ಯಾರ್ಥಿಯ ಭವಿಷ್ಯ ರೂಪುಗೊಳ್ಳುವುದು ಈ ಹಂತದಲ್ಲಿಯೇ. ಇಲ್ಲಿ ಸಿಗುವ ಅಮೂಲ್ಯ ಸಮಯವನ್ನು ವಿದ್ಯಾರ್ಥಿ ಎಷ್ಟು ಉಪಯುಕ್ತವಾಗಿ ಬಳಸಿಕೊಳ್ಳುತ್ತಾನೋ ಅದರ ಮೇಲೆ ಆತನ ಭವಿಷ್ಯ ನಿರ್ಧಾರವಾಗುತ್ತದೆ. ಪ್ರತಿ ಕ್ಷಣವನ್ನೂ ವ್ಯರ್ಥವಾಗದಂತೆ ನೋಡಿಕೊಳ್ಳಬೇಕು. ನಿರ್ದಿಷ್ಟ ಗುರಿಯೊಂದಿಗೆ ಅಧ್ಯಯನ, ಸಂಶೋಧನೆಯಲ್ಲಿ ತೊಡಗಬೇಕು ಎಂದು ಸಲಹೆ ನೀಡಿದರು.

**ರೋಬೋಟಿಕ್ ಎಂಜಿನಿಯರಿಂಗ್:** ರಾಷ್ಟ್ರೀಯ ಶಿಕ್ಷಣ ಸಮಿತಿ ಟ್ರಸ್ಟ್‌ನ (ಆರ್‌ಎಸ್‌ಎಸ್‌ಟಿ) ಅಧ್ಯಕ್ಷ ಡಾ. ಪಾಂಡುರಂಗ ಶೆಟ್ಟಿ ಮಾತನಾಡಿ, ಆರ್.ವಿ. ಎಂಜಿನಿಯರಿಂಗ್ ಕಾಲೇಜಿನಲ್ಲಿ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ಪೂರಕವಾದ ಎಲ್ಲಾ ರೀತಿಯ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ. ಇದರಿಂದಾಗಿ ರಾಜ್ಯ ಅಷ್ಟೇ ಅಲ್ಲದೆ ಜಮ್ಮು ಕಾಶ್ಮೀರ ಸೇರಿದಂತೆ ದೇಶದ ನಾನಾ ರಾಜ್ಯಗಳ ವಿದ್ಯಾರ್ಥಿಗಳೂ ಪ್ರತೀ ವರ್ಷ ಪ್ರವೇಶ ಪಡೆಯುತ್ತಿದ್ದಾರೆ. ಮುಂದಿನ ದಿನಗಳಲ್ಲಿ ರೋಬೋಟಿಕ್ ಎಂಜಿನಿಯರಿಂಗ್ ವಿಭಾಗ ಆರಂಭಿಸುವ ಚಿಂತನೆ ಮಾಡಲಾಗಿದೆ ಎಂದು ಹೇಳಿದರು.

ಆರ್.ವಿ. ಕಾಲೇಜು ದೇಶದ ಪ್ರತಿಷ್ಠಿತ ಕಾಲೇಜುಗಳಲ್ಲೊಂದಾಗಿ ಬೆಳೆಯಲು ಕಾಲೇಜಿನ ಪ್ರಾಂಶುಪಾಲರು, ಬೋಧಕ ವರ್ಗದ ಪಾತ್ರ ಮಹತ್ವದ್ದಾಗಿದೆ. ವಿದ್ಯಾರ್ಥಿಗಳು ಎಂಜಿನಿಯರಿಂಗ್ ಶಿಕ್ಷಣದ ಜತೆಗೆ, ಕಲೆ, ಸಂಗೀತ, ಸಾಹಿತ್ಯ ಸೇರಿದಂತೆ ಪಠ್ಯೇತರ ಚಟುವಿಟಿಕೆಗಳನ್ನೂ ನೀಡುತ್ತಿದ್ದಾರೆ. ವಿದ್ಯಾರ್ಥಿಗಳ ಉತ್ತಮ ಶೈಕ್ಷಣಿಕ ಸಾಧನೆ ಹಾಗೂ ಪೋಷಕರ ಸಹಕಾರದಿಂದ ಕಾಲೇಜು ದೊಡ್ಡ ಮಟ್ಟದಲ್ಲಿ ಹೆಸರು ಮಾಡಿದೆ ಎಂದು ಶ್ಲಾಘಿಸಿದರು.

ಕಾರ್ಯಕ್ರಮದಲ್ಲಿ 2016ನೇ ಯುಪಿಎಸ್‌ಸಿ ಪರೀಕ್ಷೆಯಲ್ಲಿ ವಿವಿಧ ರ‍್ಯಾಂಕ್ ಪಡೆದ ಕಾಲೇಜಿ ಹಳೆಯ ವಿದ್ಯಾರ್ಥಿಗಳಾದ ಪ್ರವೀಣ್ ಕುಮಾರ್, ಆನಂದ್ ರತ್ನಲ್, ಅಪರ್ಣ, ರೋಹಿತ್ ಭೂಪತಿ ಅವರನ್ನು ಗೌರವಿಸಲಾಯಿತು. ಆರ್‌ಎಸ್‌ಎಸ್ ಟ್ರಸ್ಟ್‌ನ ಗೌರವ ಕಾರ್ಯದರ್ಶಿ ಎ.ವಿ.ಎಸ್. ಮೂರ್ತಿ, ಕಾಲೇಜಿನ ಪ್ರಾಂಶುಪಾಲ ಡಾ.ಕೆ.ಎನ್. ಸುಬ್ರಹ್ಮಣ್ಯ, ನಾಗರಾಜ್ ಸೇರಿದಂತೆ ಟ್ರಸ್ಟ್‌ನ ವಿವಿಧ ಪದಾಧಿಕಾರಿಗಳು ಹಾಗೂ ಇತರರು ಉಪಸ್ಥಿತರಿದ್ದರು.




ನಗರದ ಆರ್.ವಿ. ಎಂಜಿನಿಯರಿಂಗ್ ಕಾಲೇಜಿನಲ್ಲಿ '2017-18ನೇ ಸಾಲಿನ ಪ್ರಥಮ ಸೆಮಿಸ್ಟರ್ ಬಿ.ಇ. ತರಗತಿ ಕಾರ್ಯಕ್ರಮ'ಗಳನ್ನು ಸಂಸದ ರಾಜೀವ್ ಚಂದ್ರಶೇಖರ್ ಭಾನುವಾರ ಉದ್ಘಾಟಿಸಿ ಮಾತನಾಡಿದರು. ರಾಷ್ಟ್ರೀಯ ಶಿಕ್ಷಣ ಸಮಿತಿ ಟ್ರಸ್ಟ್‌ನ ಅಧ್ಯಕ್ಷ ಡಾ. ಪಾಂಡುರಂಗ ಶೆಟ್ಟಿ, ಟ್ರಸ್ಟ್‌ನ ಗೌರವ ಕಾರ್ಯದರ್ಶಿ ಎ.ವಿ.ಎಸ್. ಮೂರ್ತಿ, ಕಾಲೇಜಿನ ಪ್ರಾಂಶುಪಾಲ ಡಾ.ಕೆ.ಎನ್. ಸುಬ್ರಹ್ಮಣ್ಯ ಮತ್ತಿತರ ಗಣ್ಯರು ಉಪಸ್ಥಿತರಿದ್ದರು.

**ದೇಶದ ಯುವ ಜನರ ಭವಿಷ್ಯದಲ್ಲಿ ದೇಶದ ಭವಿಷ್ಯ ಅಡಗಿದೆ. ಆರ್.ವಿ. ಎಂಜಿನಿಯರಿಂಗ್ ಕಾಲೇಜಿನ ಶೇ.40ರಷ್ಟು ವಿದ್ಯಾರ್ಥಿಗಳು ಹೊರ ರಾಜ್ಯದವರೆಂದು ಹೇಳುತ್ತಿದ್ದಾರೆ. ಈ ವಿದ್ಯಾರ್ಥಿಗಳು ವ್ಯಾಸಂಗದ ಜತೆಗೆ ಕರ್ನಾಟಕದ, ಬೆಂಗಳೂರಿನ ಬಗ್ಗೆಯೂ ತಿಳಿದುಕೊಳ್ಳಬೇಕು. ತಮಗೆ ಉನ್ನತ ಶಿಕ್ಷಣಕ್ಕೆ ಅವಕಾಶ ನೀಡಿದ ರಾಜ್ಯ ಮತ್ತು ನಗರಕ್ಕೆ ತಾವೇನಾದರೂ ಕಾಣಿಕೆ ನೀಡಬೇಕೆಂಬ ಗುಣ ಬೆಳೆಸಿಕೊಳ್ಳಬೇಕು.**

• **ರಾಜೀವ್ ಚಂದ್ರಶೇಖರ್**
ರಾಜ್ಯಸಭಾ ಸದಸ್ಯ